## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2019-20ನೇ ಸಾಲಿನಲ್ಲಿ ಕಾಲೋನಿ ಅಭಿವೃದ್ಧಿ ಯೋಜನೆ/ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ ವಿಧಾನಸಭಾ/ ವಿಧಾನ ಪರಿಷತ್ತು ಕ್ಷೇತ್ರಗಳ ವ್ಯಾಪ್ತಿಯಲ್ಲಿ ಪರಿಶಿಷ್ಟ ಜಾತಿಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ.

*****

**ಪ್ರಸ್ತಾವನೆ:**

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ಕಾಲೋನಿಗಳನ್ನು ಅಭಿವೃದ್ಧಿಪಡಿಸುವ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ.ರಡಿಯಲ್ಲ ನೀಡಿದ ಅನುದಾನದಿಂದ ಜಾರಿಗೊಳಿಸಲಾಗುತ್ತಿದೆ.

2011 ರ ಜನಗಣತಿಯಂತೆ ರಾಜ್ಯದ ಎಲ್ಲಾ ಗ್ರಾಮಗಳಲ್ಲಿ ಎಸ್.ಸಿ/ಎಸ್.ಟಿ. ಜನಸಂಖ್ಯೆಯ ವಿವರಗಳು ಲಭ್ಯವಿರುತ್ತವೆ. ಪರಿಶಿಷ್ಟ ಜಾತಿ ಜನರು ಇರುವ ಕಾಲೋನಿಗಳಲ್ಲಿ ಕುಡಿಯುವ ನೀರು, ರಸ್ತೆ, ವಿದ್ಯುತ್, ಒಳಚರಂಡಿ, ಸಂಪರ್ಕ ರಸ್ತೆ ಇತ್ಯಾದಿ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಸಮಗ್ರವಾಗಿ ಅಭಿವೃದ್ಧಿಪಡಿಸಬೇಕಾಗಿದೆ. ಈ ಕಾಲೋನಿಗಳಲ್ಲಿ ಈಗಾಗಲೇ ಕಲ್ಪಿಸಿರುವ ಮೂಲಭೂತ ಸೌಕರ್ಯಗಳನ್ನು ಹೊರತುಪಡಿಸಿ, ಕೊರತೆ ಇರುವ ಮೂಲಭೂತ ಸೌಕರ್ಯಗಳನ್ನು ಮಾತ್ರ ಗುರ್ತಿಸಿ ಅಭಿವೃದ್ಧಿಪಡಿಸಲು ಉದ್ದೇಶಿಸಿದೆ. ಪರಿಶಿಷ್ಟ ಜಾತಿಯ ಕಾಲೋನಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಅನುದಾನ ನೀಡಲು ಮಾನ್ಯ ವಿಧಾನಸಭಾ/ವಿಧಾನ ಪರಿಷತ್ತು ಸದಸ್ಯರು ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರಿಗೆ ಮನವಿ ಮಾಡಿರುತ್ತಾರೆ. ಆದ್ದರಿಂದ, ಸದರಿ ವಿಧಾನಸಭಾ/ವಿಧಾನ ಪರಿಷತ್ತು ಕ್ಷೇತ್ರಗಳಿಗೆ ಅನುದಾನ ನೀಡಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 206 ಎಸ್‌ಎಲ್‌ಪಿ 2019 ಬೆಂಗಳೂರು, ದಿನಾಂಕ:23-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಪರಿಶಿಷ್ಟ ಜಾತಿ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅನುಬಂಧದಲ್ಲಿ ಸೂಚಿಸಿರುವಂತೆ ವಿಧಾನಸಭಾ/ವಿಧಾನ ಪರಿಷತ್ತು ಕ್ಷೇತ್ರಗಳಿಗೆ ಈ ಕೆಳಕಂಡಂತೆ ಷರತ್ತಿಗೊಳಪಟ್ಟು ಅನುದಾನ ಮಂಜೂರು ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಜಿಲ್ಲಾಧಿಕಾರಿಗಳು ಸಂಬಂಧಿಸಿದ ಮಾನ್ಯ ವಿಧಾನಸಭಾ/ವಿಧಾನ ಪರಿಷತ್ತು ಸದಸ್ಯರು ಸೂಚಿಸುವಂತಹ ಕಾಮಗಾರಿಗಳನ್ನು ಸರ್ಕಾರದ ಆದೇಶ ಸಕಇ 375 ಎಸ್‌ಡಿಸಿ 2018 ದಿನಾಂಕ:10-10-2018 ರ ಮಾರ್ಗಸೂಚಿಗಳಿಗೊಳಪಟ್ಟು ಕೈಗೊಳ್ಳತಕ್ಕದ್ದು. ಹೀಗೆ ಸೂಚಿಸಲ್ಪಟ್ಟ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಕಾಲೋನಿ ಹಾಗೂ ರಾಜ್ಯದ ಗಡಿ ಭಾಗದಲ್ಲಿರುವ ಕಾಲೋನಿಗಳಲ್ಲಿ ಅವಶ್ಯಕತೆ ಇರುವ ಮೂಲಭೂತ ಸೌಕರ್ಯಗಳಾದ ಸಿಸಿ ರಸ್ತೆ, ಒಳಚರಂಡಿ, ಕಾಲೋನಿಗಳಲ್ಲಿ ಕುಡಿಯುವ ನೀರು, ಕಾಲೋನಿಗಳಿಗೆ ಸಂಪರ್ಕ ರಸ್ತೆಗಳು, ವಿದ್ಯುತ್ ಸಂಪರ್ಕ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದು.
2. ಜಿಲ್ಲಾಧಿಕಾರಿಗಳಿಗೆ ನೀಡಿರುವ ಆರ್ಥಿಕ ಅಧಿಕಾರದ ಮಿತಿಯಲ್ಲಿ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲು ಮತ್ತು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಈ ಮೂಲಕ ಅಧಿಕಾರ ನೀಡಲಾಗಿದೆ.

---2

3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ನಿಗದಿಪಡಿಸಿದ ಅನುದಾನವನ್ನು ತಕ್ಷಣವೇ ಜಿಲ್ಲಾಧಿಕಾರಿಗಳ ಜಂಟಿ ಖಾತೆಗೆ ಬಿಡುಗಡೆ ಮಾಡುವುದು. ಜಿಲ್ಲಾಧಿಕಾರಿಗಳು ಸದರಿ ಅನುದಾನವನ್ನು ಮಾರ್ಚ್ 2020 ರೊಳಗೆ ವೆಚ್ಚ ಮಾಡತಕ್ಕದ್ದು. ವೆಚ್ಚ ಮಾಡದೇ ಇದ್ದಲ್ಲಿ, ಉಳಿದ ಅನುದಾನವನ್ನು ಸರ್ಕಾರಕ್ಕೆ ಹಿಂತಿರುಗಿಸುವುದು.
4. ಸದರಿ ಕಾಲೋನಿಗಳಲ್ಲಿ ಪ್ರಗತಿ ಕಾಲೋನಿ ಸೇರಿ ಈಗಾಗಲೇ ಕಲ್ಪಿಸಿರುವ ಮೂಲಭೂತ ಸೌಕರ್ಯಗಳನ್ನು ಹೊರತುಪಡಿಸಿ, ಕೊರತೆ ಇರುವ ಮೂಲಭೂತ ಸೌಕರ್ಯಗಳನ್ನು ಮಾತ್ರ ಕೈಗೆತ್ತಿಕೊಳ್ಳುವುದು.
5. ಕಾಮಗಾರಿಯ ಗುಣಮಟ್ಟ ಕಾಪಾಡಲು ಮೂರನೇ ಪಾರ್ಟಿಯಿಂದ ತಪಾಸಣೆ ನಡೆಸತಕ್ಕದ್ದು.
6. ಬಿಡುಗಡೆ ಮಾಡಿರುವ ಅನುದಾನಕ್ಕೆ ಕಾಮಗಾರಿ ಪೂರ್ಣಗೊಂಡ ಉಪಯೋಗಿತ ಪ್ರಮಾಣ ಪತ್ರವನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸತಕ್ಕದ್ದು.
7. ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಲೋಕೋಪಯೋಗಿ ಇಲಾಖೆ/ಜಿಲ್ಲಾ ಪಂಚಾಯತ್, ಇಂಜಿನಿಯರಿಂಗ್ ವಿಭಾಗಕ್ಕೆ ವಹಿಸಿ, ಕೆ.ಟಿ.ಪಿ.ಪಿ. ಕಾಯ್ದೆ 1999 ರನ್ವಯ ಇ-ಪೋರ್ಟಲ್ ಮೂಲಕ ಟೆಂಡರ್ ಕರೆದು ಸದರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವುದು.
8. ಕಾಲೋನಿಗಳಲ್ಲಿ ತೆಗೆದುಕೊಳ್ಳುವ ಕಾಮಗಾರಿಗಳನ್ನು ತಪ್ಪದೇ ಜಿಯೋ ಟ್ಯಾಗ್ಡ್ (Geo-tagged) ಮಾಡಿಸುವುದು
9. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ. ಅಡಿಯಲ್ಲಿ ಲೋಕೋಪಯೋಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಜಲಸರಬರಾಜು ಇಲಾಖೆ, ನಿರ್ಮಿತಿ ಕೇಂದ್ರ ಮತ್ತು ಕೆ.ಆರ್.ಐ.ಡಿ.ಎಲ್ ಇಲಾಖೆಗಳಿಂದ ಸಿ.ಸಿ. ರಸ್ತೆ, ಒಳಚರಂಡಿ, ಮೂಲಭೂತ ಸೌಕರ್ಯ ಕಾಮಗಾರಿಗಳನ್ನು ಪ್ರತ್ಯೇಕವಾಗಿ ತೆಗೆದುಕೊಂಡಿದ್ದರೆ ಅದೇ ಕಾಮಗಾರಿಗಳನ್ನು ಈ ಅನುದಾನದಿಂದ ತೆಗೆದುಕೊಳ್ಳಬಾರದು

ಈ ಯೋಜನೆಗೆ ತಗಲುವ ವೆಚ್ಚವನ್ನು ಪರಿಶಿಷ್ಟ ಜಾತಿ ಜನರಿಗೆ, ಸಮಾಜ ಕಲ್ಯಾಣ ಇಲಾಖೆಯ ಲೆಕ್ಕಶೀರ್ಷಿಕೆ 4225-01-796-0-01 (ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು) ರಡಿ ಒದಗಿಸಿದ ಅನುದಾನದಿಂದ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಸಿ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.
5. ಎಲ್ಲಾ ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ
   } ಆಯುಕ್ತರು ಸಮಾಜ ಕಲ್ಯಾಣ ಇಲಾಖೆ ಇವರ ಮೂಲಕ
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

**ಪ್ರತಿಗಳು:**

1. ಸಂಬಂಧಪಟ್ಟ ಮಾನ್ಯ ವಿಧಾನಸಭಾ/ವಿಧಾನ ಪರಿಷತ್ತು ಸದಸ್ಯರುಗಳಿಗೆ (ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ರವರ ಮೂಲಕ)
2. ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿ-1 ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ.

*****